ಪೊಲೀಸ್ ಆಯುಕ್ತರ ಕಛೇರಿ, ಮಂಗಳೂರು ನಗರ.

ಎ.ಬಿ ಶೆಟ್ಟಿ ವೃತ್ತದ ಬಳಿ, ಮಂಗಳೂರು -575001 ದೂ. ಸಂ: 0824-2220803, ಈ-ಮೇಲ್ : magmgc@ksp.gov.in.

********************************************************************************************************

**ವಿಶೇಷ ಕಾರ್ಯ ನಿರ್ವಾಹಕ ದಂಡಾಧಿಕಾರಿ, ಮಂಗಳೂರು ನಗರ ರವರ ನಡವಳಿಗಳು**

ವಿಷಯ: 2023ನೇ ಸಾಲಿನ KEA ಪರೀಕ್ಷೆ ನಡೆಯುವ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆ ಜ್ಯಾರಿಗೊಳಿಸುವ ಕುರಿತು.

ಉಲ್ಲೇಖ: ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರು ದ.ಕ.ಜಿಲ್ಲೆ ಮಂಗಳೂರು ರವರ ಕಚೇರಿ ಪತ್ರ ಸಂಖ್ಯೆ: Exam(2)ಸಿಆರ್ 11/2023-24/ಪಿ2 ದಿನಾಂಕ: 25-10-2023

*****

**ಪ್ರಸ್ತಾವನೆ :**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿ ಉಲ್ಲೇಖ(1)ರಲ್ಲಿ ನಮೂದಿಸಿರುವ ದ.ಕ.ಜಿಲ್ಲಾಧಿಕಾರಿಯವರ ಕಚೇರಿ ಪತ್ರದಲ್ಲಿ 2023ನೇ ಸಾಲಿನ KEA ಪರೀಕ್ಷೆಯು ದಿನಾಂಕ: 29-10-2023ರಂದು ಮಂಗಳೂರು ತಾಲೂಕಿನ ಒಟ್ಟು 14 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಸದರಿ ಪರೀಕ್ಷಾ ದಿನದಂದು ಪರೀಕ್ಷೆಯನ್ನು ಸುಸೂತ್ರವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಸದ್ರಿ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಮುತ್ತ ಇರುವ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ ಸೆಕ್ಷನ್ 144 ನಿಷೇಧಾಜ್ಞೆ ಜ್ಯಾರಿಗೊಳಿಸುವಂತೆ ಕೋರಿರುತ್ತಾರೆ.

ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ದಿನಾಂಕ: 29-10-2023ರಂದು ನಡೆಯಲಿರುವ 2023ನೇ ಸಾಲಿನ KEA ಪರೀಕ್ಷೆಯು ನಡೆಯಲಿರುವ ಒಟ್ಟು 14 ಪರೀಕ್ಷಾ ಕೇಂದ್ರಗಳಲ್ಲಿ ಕಾನೂನು ಬಾಹಿರ ಚಟುವಟಿಕೆ, ಅಹಿತಕರ ಘಟನೆಗಳು ನಡೆಯದಂತೆ ಮತ್ತು ಪರೀಕ್ಷೆಗಳನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸಲು ದಿನಾಂಕ: 29-10-2023 ರಂದು ಸದರಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆಯನ್ನು ಜ್ಯಾರಿಗೊಳಿಸುವುದು ಅಗತ್ಯವೆಂದು ಮನಗಂಡು, ಶ್ರೀ ಸಿದ್ದಾರ್ಥ್ ಗೋಯಲ್, ಐ.ಪಿ.ಎಸ್, ಉಪ ಪೊಲೀಸ್ ಆಯುಕ್ತರು, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿ, ಮಂಗಳೂರು ನಗರ ಆದ ನಾನು ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

**ಆದೇಶ ಸಂಖ್ಯೆ: 18 /ಎಂ.ಎ.ಜಿ -01 /ಎಂ.ಜಿ.ಸಿ/2023, ದಿನಾಂಕ : 27-10-2023.**

ಮೇಲೆ ವಿವರಿಸಿದ ಅಂಶಗಳನ್ನು ಆಧರಿಸಿ 2023ನೇ ಸಾಲಿನ KEA ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಕಾನೂನು ಬಾಹಿರ ಚಟುವಟಿಕೆ, ಅಹಿತಕರ ಘಟನೆಗಳು ನಡೆಯದಂತೆ ಮತ್ತು ಪರೀಕ್ಷೆಗಳನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸಲು ದಿನಾಂಕ:29-10-2023 ರಂದು ಕೆಳಕಂಡ ಹದಿನಾಲ್ಕು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಕಲಂ: 144 ಸಿ.ಆರ್.ಪಿ.ಸಿ ಕಾಯ್ದೆಯನ್ವಯ ನಿಷೇಧಾಜ್ಞೆಯನ್ನುವಿಧಿಸಿ ಆದೇಶಿಸಿರುತ್ತೇನೆ.

| ಕ್ರ.ಸಂ. | ಪರೀಕ್ಷಾ ಕೇಂದ್ರಗಳು |
|---|---|
| 1. | Canara PU College, Kodialbail Mangaluru. |
| 2. | Sharada INDP PU College, Kodialbail, Mangaluru. |
| 3. | Paduva COMP PU College , Nanturu, Mangaluru. |
| 4. | St. Agnes PU College Bendore, Mangaluru. |
| 5. | Govt. PU College for Girls, Balmatta, Mangaluru. |
| 6. | St. Anne COMP PU College, Mangaluru. |
| 7. | S M Kushe PU College Attavara, Mangaluru. |
| 8. | Govt PU College for Girls, Car street, Mangaluru. |
| 9. | Milagras PU College, Hampanakatta, Mangaluru. |
| 10. | St. Aloysius PU College Kodialbail, Mangaluru. |
| 11. | BEM COMP PU College, Car Street, Mangaluru. |
| 12. | Ganapathi PU College, GHS Road, Mangaluru. |

13. Sri Narayana Guru College, Kudroli, Mangaluru.
14. Prestige PU College, Jappinamogaru, Mangaluru.

**ಈ ಅವಧಿಯಲ್ಲಿ :**

1 ನಿಷೇಧಿತ ಪ್ರದೇಶದಲ್ಲಿ ಪರೀಕ್ಷೆಗೆ ಸಂಬಂಧಿಸಿದ ಅಭ್ಯರ್ಥಿಗಳನ್ನು ಹೊರತುಪಡಿಸಿ ಸಾರ್ವಜನಿಕರು ಐದು ಯಾ ಐದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಗುಂಪು ಸೇರುವುದು ಯಾ ತಿರುಗಾಡುವುದನ್ನು ನಿಷೇಧಿಸಲಾಗಿದೆ.

2 ನಿಷೇಧಿತ ವಲಯದಲ್ಲಿ ಯಾವುದೇ ರೀತಿಯಲ್ಲಿ ಪರೀಕ್ಷೆಯಲ್ಲಿ ನಕಲು ಮಾಡಲು ಸಹಾಯ ಮಾಡುವುದು, ಚೀಟಿ ಅಥವಾ ಇನ್ನಿತರ ರೀತಿಯಲ್ಲಿ ಉತ್ತರಗಳನ್ನು ಬರೆದು, ಯಾ ಇನ್ನಾವುದೇ ವಸ್ತುಗಳನ್ನು ಹಂಚುವುದು. ರವಾನಿಸುವುದು ಇತ್ಯಾದಿ ಚಟುವಟಿಕೆಗಳನ್ನು ಸಂಪೂರ್ಣ ನಿಷೇಧಿಸಿದೆ.

3 ನಿಷೇಧಿತ ವಲಯದಲ್ಲಿ ಯಾವುದೇ ರೀತಿಯ ಕ್ಷಾರಕ (ಆಸಿಡ್) ಯಾ ಸ್ಫೋಟಕ ವಸ್ತುಗಳನ್ನು ಕೊಂಡುಹೋಗುವುದನ್ನು ಹಾಗೂ ಇನ್ನಿತರ ಮಾರಕ ಆಯುಧಗಳನ್ನು ಹೊಂದುವುದನ್ನು ನಿಷೇಧಿಸಲಾಗಿದೆ.

4 ನಿಷೇಧಿತ ವಲಯದಲ್ಲಿ ಪರೀಕ್ಷೆಗೆ ಸಂಬಂಧಿಸಿದ ಯಾವುದೇ ವಿಷಯಗಳನ್ನು ತಿಳಿಸುವ ಸಲುವಾಗಿ ಸಂಜ್ಞೆಗಳನ್ನು ಮಾಡುವುದು ಹಾಗೂ ಇನ್ನಿತರ ಕ್ರಿಯೆಗಳಲ್ಲಿ ತೊಡಗುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

5 ಪರೀಕ್ಷೆ ಪ್ರಾರಂಭವಾಗುವ ಒಂದು ಗಂಟೆ ಮುಂಚಿತವಾಗಿ ಹಾಗೂ ಪರೀಕ್ಷಾ ಅವಧಿಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಜೆರಾಕ್ಸ್ ಅಂಗಡಿಗಳು ಕಾರ್ಯ ನಿರ್ವಹಿಸುವುದನ್ನು ನಿಷೇದಿಸಿದೆ.

6 ನಿಷೇಧಿತ ವಲಯದಲ್ಲಿ ಮೊಬೈಲ್ ದೂರವಾಣಿ, ಬ್ಲೂಟೂತ್ ಹಾಗೂ ಪೇಜರ್ ಇತ್ಯಾದಿ ಎಲೆಕ್ಟ್ರಾನಿಕ್ಸ್ ಸಂಪರ್ಕ ಉಪಕರಣಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಈ ನಿಷೇಧಾಜ್ಞೆಯು ದಿನಾಂಕ: 24-09-2023 ರಂದು ಈ ಮೇಲಿನ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಮಾತ್ರ ಜ್ಯಾರಿಯಲ್ಲಿರುತ್ತದೆ.

ಈ ನಿಷೇಧಾಜ್ಞೆಯು ಜ್ಯಾರಿಯಲ್ಲಿರುವ ಪ್ರದೇಶದಲ್ಲಿ ಸರ್ಕಾರದಿಂದ ಯಾ ಸರ್ಕಾರದ ಆದೇಶದಂತೆ ನಡೆಸಲ್ಪಡುವ ಯಾವುದೇ ಕಾರ್ಯಕ್ರಮ, ಸಭೆ ಸಮಾರಂಭಗಳಿಗೆ ಅನ್ವಯವಾಗುವುದಿಲ್ಲ. ಮತ್ತು ಪೊಲೀಸ್ ಅಧಿಕಾರಿಗಳು, ಬ್ಯಾಂಕ್ ಭದ್ರತಾ ಸಿಬ್ಬಂಧಿಗಳು ಕರ್ತವ್ಯ ನಿರ್ವಹಣೆ ವೇಳೆ ಲಾಠಿ/ ಶಸ್ತ್ರಾಸ್ತ್ರ ಉಪಯೋಗಿಸುವುದಕ್ಕೆ ಅನ್ವಯವಾಗುವುದಿಲ್ಲ.

ಈ ನಿಷೇಧಾಜ್ಞೆಯನ್ನು ದಿನಾಂಕ: 27-10-2023 ರಂದು ನನ್ನ ಸ್ವ ಹಸ್ತ ಸಹಿ ಹಾಗೂ ಮುದ್ರೆಯೊಂದಿಗೆ ಹೊರಡಿಸಿರುತ್ತೇನೆ.

SPECIAL EXECUTIVE MAGISTRATE AND DY. COMMISSIONER OF POLICE (Law & Order) Mangaluru City, Mangaluru

(ಸಿದ್ಧಾರ್ಥ್ ಗೋಯೆಲ್, ಐ.ಪಿ.ಎಸ್.)
ಉಪ ಪೊಲೀಸು ಆಯುಕ್ತರು,(ಕಾ & ಸು) ಹಾಗೂ
ವಿಶೇಷ ಕಾರ್ಯ ನಿರ್ವಾಹಕ ದಂಡಾಧಿಕಾರಿ
ಮಂಗಳೂರು ನಗರ , ಮಂಗಳೂರು

ಪ್ರತಿ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ:-

1 ಜಿಲ್ಲಾಧಿಕಾರಿಯವರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರಿಗೆ ಮಾಹಿತಿಗಾಗಿ.

2 ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ಪ್ರವೇಶ ಪ್ರಾಧಿಕಾರ, ಬೆಂಗಳೂರು

3 ಉಪ ಪೊಲೀಸು ಆಯುಕ್ತರು, (ಅಪರಾಧ ಮತ್ತು ಸಂಚಾರ), ಮಂಗಳೂರು ನಗರ.

4 ಸಹಾಯಕ ಪೊಲೀಸು ಆಯುಕ್ತರು, ಮಂಗಳೂರು ಕೇಂದ್ರ ಮತ್ತು ದಕ್ಷಿಣ ಉಪ ವಿಭಾಗ ಇವರಿಗೆ- ತಮ್ಮ ವ್ಯಾಪ್ತಿಯಲ್ಲಿ ಈ ಆದೇಶವನ್ನು ಜ್ಯಾರಿಗೊಳಿಸಿ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸೂಕ್ತ ಪೊಲೀಸು ಬಂದೋಬಸ್ತು ಒದಗಿಸಲು ಸೂಚಿಸಿದೆ.

5 ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿ, ದ.ಕ ಜಿಲ್ಲೆ ಮಂಗಳೂರು ಇವರಿಗೆ ಈ ಅಧಿಸೂಚನೆಯನ್ನು ಜಿಲ್ಲೆಯ ವಾರ್ತಾ ಮಾಧ್ಯಮಗಳಲ್ಲಿ ವಾರ್ತಾ ರೂಪದಲ್ಲಿ ಉಚಿತವಾಗಿ ಪ್ರಚಾರ ಪಡಿಸಲು ಕೋರಿದೆ.

6 ತಹಶೀಲ್ದಾರರು,ಮಂಗಳೂರು ತಾಲೂಕು.

7 ಈ ಕಛೇರಿಯ ಗಣಕಯಂತ್ರ ಶಾಖೆಗೆ ಪೊಲೀಸ್ ಬ್ಲಾಗ್‌ನಲ್ಲಿ ಅಳವಡಿಸಲು.

8 ಈ ಕಛೇರಿಯ ಸಿ.ಬಿ ಶಾಖೆ ಮತ್ತು ಸಿ.ಎಸ್.ಬಿ ಶಾಖೆಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

10 ಪೊಲೀಸ್ ನಿರೀಕ್ಷಕರು, ನಗರ ನಿಯಂತ್ರಣ ಕೊಠಡಿ ರವರಿಗೆ ಸೂಕ್ತ ಕ್ರಮಕ್ಕಾಗಿ.

***********